ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ಅಡುಗೆ ಅನಿಲ ಸಂಪರ್ಕವನ್ನು ಪಡೆದಿರುವ ಫಲಾನುಭವಿಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

167(71) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆಯ 07 ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ಅಡುಗೆ ಅನಿಲ ಸಂಪರ್ಕವನ್ನು ಪಡೆದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸದರಿ ಸಂಪರ್ಕವನ್ನು ಹಂಚಲು ಬಾಕಿ ಇರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಬಾಕಿಯಿರುವ ಅರ್ಜಿಗಳನ್ನು ಎಷ್ಟು ದಿನಗಳಲ್ಲಿ ವಿಲೇವಾರಿ ಮಾಡಲಾಗುವುದು, ಅಡುಗೆ ಅನಿಲ ಸಂಪರ್ಕವನ್ನು ನೀಡಲು ಸರ್ಕಾರ ನಿಗಧಿಪಡಿಸಿರುವ ಮಾನದಂಡಗಳೇನು; ಈ ಅಡುಗೆ ಅನಿಲ ಸಂಪರ್ಕವನ್ನು ಪಡೆಯಲು ಬಾಕಿ ಇದರ ಪ್ರಕರಣದಲ್ಲಿ ಎಷ್ಟು ದಿನದೊಳಗೆ ವಿತರಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು)